FILE No. ENERGY/942/VSC/2020-EMC-ENERGY SECRETARIAT

ಕರ್ನಾಟಕ ಸರ್ಕಾರ

ಸಂಖ್ಯೆ: ಎನರ್ಜಿ 942 ವಿಎಸ್‌ಸಿ 2020

ಕರ್ನಾಟಕ ಸರ್ಕಾರದ ಸಚಿವಾಲಯ,
2ನೇ ಮಹಡಿ, ವಿಕಾಸ ಸೌಧ,
ಬೆಂಗಳೂರು, ದಿನಾಂಕ: 06-11-2020

ಇವರಿಂದ:

ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿಗಳು,
ಇಂಧನ ಇಲಾಖೆ, ವಿಕಾಸ ಸೌಧ,
ಬೆಂಗಳೂರು.

ಇವರಿಗೆ:

ವ್ಯವಸ್ಥಾಪಕ ನಿರ್ದೇಶಕರು,
ಬೆಸ್ಕಾಂ/ಸೆಸ್ಕ್/ಮೆಸ್ಕಾಂ/ಹೆಸ್ಕಾಂ/ಜೆಸ್ಕಾಂ.

ಮಾನ್ಯರೆ,

ವಿಷಯ: ಗಂಗಾ ಕಲ್ಯಾಣ ಯೋಜನೆಯಡಿ ಹೊಸದಾಗಿ ರಚನೆಯಾಗಿರುವ ಅಭಿವೃದ್ಧಿ ನಿಗಮಗಳಿಂದ ಅರ್ಜಿಗಳನ್ನು ನೋಂದಾಯಿಸಿಕೊಳ್ಳುವ ಬಗ್ಗೆ.

ಉಲ್ಲೇಖ: ಅಧೀಕ್ಷಕ ಇಂಜನಿಯರ್ (ತಾಂತ್ರಿಕ), ಮೆಸ್ಕಾಂ ರವರ ಪತ್ರ ಸಂಖ್ಯೆ: ಅ.ಇಂ (ತಾಂ)/ ಇಇ(ತಾಂ)/ಸಕಾಇಂ-2/ಎಂ1-1034/20-21/4259-68, ದಿನಾಂಕ: 12-10-2020.

****

ಮೇಲ್ಕಂಡ ವಿಷಯಕ್ಕೆ ಸಂಬಂಧಿಸಿದಂತೆ, ಅಧೀಕ್ಷಕ ಇಂಜನಿಯರ್ (ತಾಂತ್ರಿಕ), ಮೆಸ್ಕಾಂ ರವರು ಮೆಸ್ಕಾಂ ಕಂಪನಿ ವ್ಯಾಪ್ತಿಯಲ್ಲಿ ಗಂಗಾ ಕಲ್ಯಾಣ ಯೋಜನೆಯಡಿ ವಿದ್ಯುತ್ ಸಂಪರ್ಕ ಕೋರಿ, ಪ್ರಸ್ತುತ ಈ ಕೆಳಕಂಡ ನಿಗಮಗಳಿಂದ ಅರ್ಜಿಗಳು ಸ್ವೀಕೃತವಾಗುತ್ತಿದ್ದು, ಸದರಿ ಅಭಿವೃದ್ಧಿ ನಿಗಮಗಳ ಅರ್ಜಿಗಳನ್ನು ನೋಂದಾಯಿಸಿಕೊಳ್ಳುವ ಕುರಿತು ಉಲ್ಲೇಖಿತ ಪತ್ರದನ್ವಯ ನಿರ್ದೇಶನವನ್ನು ಕೋರಲಾಗಿತ್ತು.

1) ಕರ್ನಾಟಕ ಉಪ್ಪಾರ ಅಭಿವೃದ್ಧಿ ನಿಗಮ
2) ಕರ್ನಾಟಕ ಆದಿ ಜಾಂಬವ ಅಭಿವೃದ್ಧಿ ನಿಗಮ
3) ನಿಜಶರಣ ಅಂಬಿಗಳ ಚೌಡಯ್ಯ ಅಭಿವೃದ್ಧಿ ನಿಗಮ
4) ಕರ್ನಾಟಕ ಭೋವಿ ಅಭಿವೃದ್ಧಿ ನಿಗಮ

**FILE No. ENERGY/942/VSC/2020-EMC-ENERGY SECRETARIAT**

ಈ ಹಿನ್ನೆಲೆಯಲ್ಲಿ, ಈ ಮೇಲಿನ ಅಭಿವೃದ್ಧಿ ನಿಗಮಗಳು ಗಂಗಾ ಕಲ್ಯಾಣ ಯೋಜನೆಯಡಿ ಕೊರೆಯುವ ಕೊಳವೆ ಬಾವಿಗಳಿಗೆ ವಿದ್ಯುತ್ ಸಂಪರ್ಕ ಕಲ್ಪಿಸುವ ಸಲುವಾಗಿ ವಿದ್ಯುತ್ ಸರಬರಾಜು ಕಂಪನಿಗಳ ಸ್ಥಳೀಯ ಕಛೇರಿಗಳಲ್ಲಿ ಅರ್ಜಿಗಳನ್ನು ಈ ಕೆಳಕಂಡ ಷರತ್ತಿಗೊಳಪಟ್ಟು ನೋಂದಾಯಿಸಿಕೊಳ್ಳಲು ನಿಯಮಾನುಸಾರ ಕ್ರಮ ವಹಿಸುವಂತೆ ತಮ್ಮನ್ನು ಕೋರಲು ನಿರ್ದೇಶಿಸಲ್ಪಟ್ಟಿದ್ದೇನೆ.

1) ಪ್ರಸ್ತಾವಿತ 4 ಅಭಿವೃದ್ಧಿ ನಿಗಮಗಳು on-line ತಂತ್ರಾಂಶದ ಮೂಲಕ ಅಗತ್ಯ ದಾಖಲೆಗಳೊಂದಿಗೆ ಅರ್ಜಿಗಳನ್ನು ಸಲ್ಲಿಸಬೇಕು ಮತ್ತು ಪ್ರತಿ ಕೊಳವೆ ಬಾವಿಯ ವಿದ್ಯುದೀಕರಣಕ್ಕೆ ರೂ. 50,000/– ಗಳನ್ನು ವಿದ್ಯುತ್ ಸರಬರಾಜು ಕಂಪನಿಗಳಿಗೆ ಪಾವತಿಸಬೇಕು.

2) ಪ್ರಸ್ತುತ, ವಿದ್ಯುತ್ ಸರಬರಾಜು ಕಂಪನಿಗಳು ಪ್ರತಿ ಕೊಳವೆ ಬಾವಿಯ ವಿದ್ಯುದೀಕರಣಕ್ಕೆ ರೂ. 50,000/–ಕ್ಕಿಂತ ಹೆಚ್ಚಿನ ಮೊತ್ತವನ್ನು ಭರಿಸುತ್ತಿದ್ದು, ಸದರಿ ಮೊತ್ತವನ್ನು ಪರಿಷ್ಕರಿಸುವ ಕುರಿತು ಆರ್ಥಿಕ ಇಲಾಖೆಗೆ ಪ್ರಸ್ತಾವನೆಯನ್ನು ಸಲ್ಲಿಸಿದ್ದು, ಆರ್ಥಿಕ ಇಲಾಖೆಯ ನಿರ್ಣಯದಂತೆ, ಪರಿಷ್ಕೃತ ವಿದ್ಯುದೀಕರಣ ವೆಚ್ಚವನ್ನು ಸದರಿ ಅಭಿವೃದ್ಧಿ ನಿಗಮಗಳೂ ಸಹ ಭರಿಸಬೇಕು.

**ಹೊರಡಿಸಿದೆ**

ದಿನಾಂಕ: 6/11/2020

ತಮ್ಮ ವಿಶ್ವಾಸಿ,

N. Mangalagowri 6/11/2020

(ಎನ್. ಮಂಗಳಗೌರಿ)

ಸರ್ಕಾರದ ಅಧೀನ ಕಾರ್ಯದರ್ಶಿ,

ಇಂಧನ ಇಲಾಖೆ.

06.11.2020

ಪ್ರತಿ ಮಾಹಿತಿ ಹಾಗೂ ಸೂಕ್ತ ಕ್ರಮಕ್ಕಾಗಿ:

1) ವ್ಯವಸ್ಥಾಪಕ ನಿರ್ದೇಶಕರು, ಕರ್ನಾಟಕ ಉಪ್ಪಾರ ಅಭಿವೃದ್ಧಿ ನಿಗಮ, ಡಿ. ದೇವರಾಜ ಅರಸು ಭವನ, 4ನೇ ಮಹಡಿ, ಮಿಲ್ಲರ್ ಟ್ಯಾಂಕ್ ಬೆಡ್ ಏರಿಯ, ವಸಂತನಗರ, ಬೆಂಗಳೂರು – 560 052.
2) ವ್ಯವಸ್ಥಾಪಕ ನಿರ್ದೇಶಕರು, ಕರ್ನಾಟಕ ಆದಿ ಜಾಂಬವ ಅಭಿವೃದ್ಧಿ ನಿಗಮ, No. 17/5, Oblong Block, 2nd Floor, Near Town Hall, ಬೆಂಗಳೂರು – 560 002.
3) ವ್ಯವಸ್ಥಾಪಕ ನಿರ್ದೇಶಕರು, ನಿಜಶರಣ ಅಂಬಿಗಳ ಚೌಡಯ್ಯ ಅಭಿವೃದ್ಧಿ ನಿಗಮ, ನೆಲ ಮಹಡಿ, ಪೋಡಿಯಂ ಬ್ಲಾಕ್, ವಿ.ವಿ ಟವರ್, ಡಾ॥ ಬಿ.ಆರ್. ಅಂಬೇಡ್ಕರ್ ವೀದಿ, ಬೆಂಗಳೂರು – 560 001.
4) ವ್ಯವಸ್ಥಾಪಕ ನಿರ್ದೇಶಕರು, ಕರ್ನಾಟಕ ಭೋವಿ ಅಭಿವೃದ್ಧಿ ನಿಗಮ, ನಂ. 177/4, 2ನೇ ಮುಖ್ಯ ರಸ್ತೆ, 2ನೇ ಅಡ್ಡ ರಸ್ತೆ, ಭೋವಿ ಪಾಳ್ಯ, ಮಹಾಲಕ್ಷ್ಮೀಪುರಂ, ಬೆಂಗಳೂರು – 560 086.

ಸಂಖ್ಯೆ: ಪ್ರವ್ಯ(ತಾ)/ಉಪ್ರವ್ಯ(ತಾ)/ಸಪ್ರವ್ಯ(ತಾ)-1/2020-21/ CYS-1069 ದಿನಾಂಕ: 23 NOV 2020

ಮಾಹಿತಿಗಾಗಿ ಹಾಗೂ ಸೂಕ್ತ ಕ್ರಮಕ್ಕಾಗಿ:

1. ಮುಖ್ಯ ಆರ್ಥಿಕ ಅಧಿಕಾರಿಗಳು, ನಿಗಮ ಕಛೇರಿ, ಚಾವಿಸನಿನಿ, ಮೈಸೂರು.
2. ಮುಖ್ಯ ಇಂಜಿನಿಯರ್ (ವಿ), ಕಾರ್ಯ ಮತ್ತು ಪಾಲನಾ ವಲಯ, ಚಾ.ವಿ.ಸ.ನಿ.ನಿ., ಮೈಸೂರು/ಹಾಸನ
3. ಪ್ರಧಾನ ವ್ಯವಸ್ಥಾಪಕರು ಖರೀದಿ/ಯೋಜನೆ/ವಾಣಿಜ್ಯ, ಆಡಳಿತ ಕಛೇರಿ, ಚಾವಿಸನಿನಿ, ಮೈಸೂರು
4. ಎಲ್ಲಾ ಅಧೀಕ್ಷಕ ಇಂಜಿನಿಯರ್ (ವಿ), ಕಾ ಮತ್ತು ಪಾ ವೃತ್ತ, ಚಾವಿಸನಿನಿ
5. ಎಲ್ಲಾ ಕಾರ್ಯನಿರ್ವಾಹಕ ಇಂಜಿನಿಯರ್(ವಿ), ಕಾ ಮತ್ತು ಪಾ ವಿಭಾಗ, ಚಾವಿಸನಿನಿ
6. ಉಪ ಪ್ರಧಾನ ವ್ಯವಸ್ಥಾಪಕರು(ಎಂ.ಐ.ಎಸ್), ನಿಗಮ ಕಛೇರಿ, ಚಾವಿಸನಿನಿ, ಮೈಸೂರು ನಿಗಮದ ವೆಬ್‌ಸೈಟ್‌ನಲ್ಲಿ ಪ್ರಕಟಿಸಲು.
7. ಆ.ಸ, ವ್ಯವಸ್ಥಾಪಕ ನಿರ್ದೇಶಕರು/ನಿರ್ದೇಶಕರು (ತಾಂತ್ರಿಕ) ಇವರ ಗಮನಕ್ಕೆ.

21/11/20

ಪ್ರಧಾನ ವ್ಯವಸ್ಥಾಪಕರು (ತಾಂತ್ರಿಕ),
ಚಾ.ವಿ.ಸ.ನಿ.ನಿ., ಮೈಸೂರು.